ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

ನೂರ ಮೂವತ್ತೆಂಟನೆಯ ಅಧಿವೇಶನ

ಬುಧವಾರ, ದಿನಾಂಕ: 17ನೇ ಜುಲೈ, 2019

ಸರ್ಕಾರಿ ಜಮೀನುಗಳ ಅತಿಕ್ರಮಣದ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

209 (373) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಇರುವ ಗೋಮಾಳ, ಗೋಕಟ್ಟೆ ಹಾಗೂ ಇತರೆ ಸರ್ಕಾರಿ ಜಮೀನುಗಳ ಸಂಖ್ಯೆ ಎಷ್ಟು; (ಸಂಪೂರ್ಣ ವಿವರಗಳನ್ನು ಸರ್ವೆ ನಂ. ಸಹಿತ ಹೋಬಳಿವಾರು ಸೂಕ್ತ ದಾಖಲೆಗಳೊಂದಿಗೆ ನೀಡುವುದು)

(ಆ) ಈ ಗೋಮಾಳ, ಗೋಕಟ್ಟೆ ಹಾಗೂ ಇನ್ನಿತರೆ ಸರ್ಕಾರಿ ಜಮೀನುಗಳನ್ನು ಅತಿಕ್ರಮಣ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಎಷ್ಟು ಪ್ರಕರಣಗಳನ್ನು ಗುರುತಿಸಲಾಗಿದೆ; (ಪ್ರಕರಣವಾರು ಸಂಪೂರ್ಣ ಮಾಹಿತಿ ನೀಡುವುದು)

(ಇ) ಅತಿಕ್ರಮಣ ಮಾಡಿರುವ ಪ್ರಕರಣಗಳನ್ನು ನಿಯಮಾನುಸಾರ ಸಕ್ರಮಗೊಳಿಸಲಾಗಿದೆಯೇ; ಹಾಗಿದ್ದಲ್ಲಿ, ಸಕ್ರಮಗೊಳಿಸಿರುವ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಸಕ್ರಮವಾಗದೇ ಬಾಕಿ ಉಳಿದಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಬಾಕಿ ಉಳಿಯಲು ಕಾರಣಗಳೇನು? (ವಿವರ ನೀಡುವುದು)